ಈ) ಅರಣ್ಯ ಇಲಾಖೆ ಜಮೀನನ್ನು ತೆರವುಗೊಳಿಸಲು ಕರ್ನಾಟಕ ಅರಣ್ಯ ಕಾಯ್ದೆ 1963 ರ ಪ್ರಕಾರ ಅರಣ್ಯ ಮೊಕದ್ದಮೆ ದಾಖಲಿಸಿ ನಿಯಮ 64(ಎ) ಪ್ರಕಾರ ನಡವಳಿಯನ್ನು ನಡೆಸಿ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗಿದೆ. ಹಾಗೂ ಅರಣ್ಯ ಭೂಮಿ ಒತ್ತುವರಿಯಾಗದಂತೆ ತಡೆಗಟ್ಟಲು ಅರಣ್ಯ ಪ್ರದೇಶದ ಗಡಿ ಸುತ್ತಲೂ ಕಲ್ಲುಗೋಡೆ ನಿರ್ಮಿಸುವುದು ಹಾಗೂ ಸೋಲಾರ್ ತಂತಿಬೇಲಿ ನಿರ್ಮಾಣ ಮಾಡುವುದರ ಮೂಲಕ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ರಾಜ್ಯದಲ್ಲಿರುವ ಇ.ಎಸ್.ಐ. ಆಸ್ಪತ್ರೆಗಳ ವ್ಯವಸ್ಥೆಯ ಬಗ್ಗೆ

10(27): ಶ್ರೀ ಹ್ಯಾರಿಸ್ ಎನ್. ಎ. ವಿಧಾನಸಭಾ ಸದಸ್ಯರು (ಶಾಂತಿನಗರ): ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿರುವ ಒಟ್ಟು ಇ.ಎಸ್.ಐ. ಆಸ್ಪತ್ರೆಗಳೆಷ್ಟು? ಅವುಗಳನ್ನು ಸುವ್ಯವಸ್ಥೆಯಲ್ಲಿಡಲು ರಾಜ್ಯ ಸರ್ಕಾರದ ಹೊಣೆಗಾರಿಕೆಗಳೇನು?

ಆ) ಕೇಂದ್ರ ಸರ್ಕಾರದವರು ಕಳೆದ ಎರಡು ವರ್ಷಗಳಲ್ಲಿ ಇ.ಎಸ್.ಐ. ಆಸ್ಪತ್ರೆಗಳ ಅಭಿವೃದ್ಧಿಗಾಗಿ ಮಂಜೂರು ಮಾಡಿದ ಹಣದ ಮೊತ್ತವೆಷ್ಟು?

ಇ) ಇ.ಎಸ್.ಐ. ಆಸ್ಪತ್ರೆಗಳಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಚ್ಚೇಗೌಡ (ಕಾರ್ಮಿಕ ಸಚಿವರು):

ಅ) 08 ಕಾರಾವಿ ಆಸ್ಪತ್ರೆ (ಕಾರಾವಿ ನಿಗಮದ ಮಾದರಿ ಆಸ್ಪತ್ರೆ, ರಾಜಾಜಿನಗರ ಒಳಗೊಂಡಂತೆ) 101 ಕಾರಾವಿ ಚಿಕಿತ್ಸಾಲಯ, 03 ಐ. ಎಂ. ಪಿ. ಚಿಕಿತ್ಸಾಲಯ, 01 ರೋಗ ಪತ್ತೆ ಹಚ್ಚುವ ಕೇಂದ್ರ ಕಾರ್ಯ ನಿರ್ವಹಿಸುತ್ತಿದೆ. ಈ ಕೆಳಕಂಡ ಪ್ರಮುಖ ಹೊಣೆಗಾರಿಕೆ ರಾಜ್ಯ ಸರ್ಕಾರದ್ದಾಗಿರುತ್ತದೆ.

1. ವಿಮಾದಾರರಿಗೆ ಹಾಗೂ ಅವರ ಕುಟುಂಬದವರಿಗೆ ಪೂರ್ಣ ಪ್ರಮಾಣದ ವೈದ್ಯಕೀಯ ಸೌಲಭ್ಯವನ್ನು ಒದಗಿಸುವುದು.
2. ವಿಮಾ ರೋಗಿಗಳಿಗೆ ನಿರಂತರ ಔಷಧಿ ಸರಬರಾಜು.
3. ಕಾರಾವಿ ಆಸ್ಪತ್ರೆ/ಚಿಕಿತ್ಸಾಲಯಗಳನ್ನು ಪ್ರಾರಂಭಿಸುವುದು ಹಾಗೂ ಅವುಗಳಲ್ಲಿ ಎಲ್ಲಾ ಸೌಲಭ್ಯವನ್ನು ಒದಗಿಸುವುದು.

4. ಕಾರಾವಿ ಆಸ್ಪತ್ರೆ/ಚಿಕಿತ್ಸಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವುದು.
5. ಆಸ್ಪತ್ರೆ/ಚಿಕಿತ್ಸಾಲಯಗಳ ಉನ್ನತೀಕರಣ.

ಆ) ಕೇಂದ್ರ ಸರ್ಕಾರದ ವತಿಯಿಂದ ನೇರವಾಗಿ ಇ.ಎಸ್.ಐ. ಆಸ್ಪತ್ರೆಗಳ ಅಭಿವೃದ್ಧಿಗಾಗಿ ಹಣ ಬಿಡುಗಡೆಯಾಗಿರುವುದಿಲ್ಲ. ಆದರೆ ಕಾರಾವಿ ನಿಗಮದ ವತಿಯಿಂದ ಕಾರಾವಿ ಆಸ್ಪತ್ರೆ, ಮೈಸೂರು, ದಾವಣಗೆರೆ, ದಾಂಡೇಲಿ ಹಾಗೂ ಹುಬ್ಬಳ್ಳಿಯ ನವೀಕರಣ ಕಾರ್ಯ ಕೈಗೊಂಡಿರುತ್ತದೆ.

ಇ) 1) ಇಲಾಖೆಯಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಪೈಕಿ 95 ವಿಮಾ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಹಾಗೂ 05 ಸಹಾಯಕ ದಂತ ಶಸ್ತ್ರಚಿಕಿತ್ಸಕರ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ.

2) 96 ಶುಶ್ರೂಷಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ.

3) ಇಲಾಖೆಯಲ್ಲಿ ಖಾಲಿ ಇರುವ ತಜ್ಞ ವೈದ್ಯಾಧಿಕಾರಿಗಳ ಕೊರತೆಯನ್ನು ನಿವಾರಿಸಲು ಒಟ್ಟಾರೆ 21 ಅಂಶಕಾಲಿಕ ತಜ್ಞ ವೈದ್ಯಾಧಿಕಾರಿ ಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ.

4) ಕಾರಾವಿ ನಿಗಮ ಹಾಗೂ ರಾಜ್ಯ ಸರ್ಕಾರದ ವತಿಯಿಂದ ನೇರ ಸಂದರ್ಶನದ ಮುಖಾಂತರ 56 ತಜ್ಞ ವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ.

5) ಇಲಾಖೆಯಲ್ಲಿ ವಿಮಾ ವೈದ್ಯಾಧಿಕಾರಿಗಳ ಕೊರತೆಯನ್ನು ನಿವಾರಿಸಲು 10 ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ.

ಸಿಂಧನೂರು ತಾಲ್ಲೂಕಿನಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಕೈಗೊಂಡ ಕಾಮಗಾರಿಗಳ ಬಗ್ಗೆ

11(40): ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು): ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?